# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1502

ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 10-03-2022

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆ ಪರಿಷ್ಕರಣೆ ಸಂಬಂಧ 7ನೇ ವೇತನ ಆಯೋಗವನ್ನು ರಚಿಸಲು ಸರ್ಕಾರ ಚಿಂತಿಸುವುದೇ; | ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ/ವೇತನ ಸಮಿತಿಗಳ ಶಿಫಾರಸ್ಸಿನ ಮೇರೆಗೆ, ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ತುಟ್ಟಿಭತ್ಯೆಯೂ ಸೇರಿದಂತೆ ಇತರೆ ಭತ್ಯೆಗಳನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬರಲಾಗಿರುತ್ತದೆ. ಇದು ಸರ್ಕಾರದ ನೀತಿಯಾಗಿರುತ್ತದೆ.<br>ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ರಾಜ್ಯ ಸರ್ಕಾರದ ನೌಕರರಿಗೆ ಅನ್ವಯಿಸುವುದಿಲ್ಲ. ಆದುದರಿಂದ, ಕೇಂದ್ರ ಸರ್ಕಾರದ ಹುದ್ದೆ ಮತ್ತು ಹುದ್ದೆಗಳಿಗೆ ನಿಗದಿಪಡಿಸಿರುವ ವೇತನ ಶ್ರೇಣಿ ಮತ್ತು ಭತ್ಯೆಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಅನ್ವಯಿಸಿ ಹೋಲಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.<br>ವೇತನ ಪರಿಷ್ಕರಣೆಯ ವಿಷಯವು ಸರ್ಕಾರದ |
| (ಆ) | ಕೇಂದ್ರ ಸರ್ಕಾರಿ ನೌಕರರು ಪಡೆಯುತ್ತಿರುವ ವೇತನಕ್ಕೆ ಸಮಾನಾಂತವಾಗಿ ರಾಜ್ಯ ಸರ್ಕಾರಿ ನೌಕರರಿಗೂ ವೇತನ ಹಾಗೂ ಭತ್ಯೆಗಳನ್ನು ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; | |

| | | |
|---|---|---|
| | | ನೀತಿ ನಿರ್ಣಯಕ್ಕೆ ಸಂಬಂಧಿಸಿದ್ದಾಗಿದ್ದು, ಈ ಬಗ್ಗೆ ಸರ್ಕಾರದ ಆಯವ್ಯಯ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಸಂದರ್ಭಾನುಸಾರ ಕ್ರಮ ಕೈಗೊಳ್ಳಲಾಗುವುದು. |
| (ಇ) | ರಾಜ್ಯದಲ್ಲಿ ದಿನಾಂಕ: 1-4-2006ರ ನಂತರ ಹೊಸ ಪಿಂಚಣಿ ಯೋಜನೆ ಜಾರಿಯಾದ ನಂತರ ಖಾಸಗಿ/ಸರ್ಕಾರಿ ನೌಕರರಿಗೆ ಆರ್ಥಿಕ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ |
| (ಈ) | ಹಾಗಾದರೆ ಯಾವ ಕಾಲಮಿತಿಯಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದು? | ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂ: ಆಇ 13 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 08/03/2022 06:48 PM